## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2014-15ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಗೆ ಎರಡನೇ ಕಂತಿನ ಅನುದಾನ ಬಿಡುಗಡೆ ಕುರಿತು.

ಓದಲಾಗಿದೆ: 1) ವ್ಯವಸ್ಥಾಪಕ ನಿರ್ದೇಶಕರು, KSBDB ರವರ ಪತ್ರ ಸಂಖ್ಯೆ : KSBDB/Grant-in-Aid/CR-18/2011-12/197 ದಿನಾಂಕ 12.08.2014

2) ಸರ್ಕಾರಿ ಪತ್ರ ಸಂಖ್ಯೆ : ಗ್ರಾಅಪ/21/ಜೈಅಯೋ/2014 ದಿನಾಂಕ: 19.07.2014

3) ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ/43/ಜೈಅಯೋ/2014, ಬೆಂಗಳೂರು, ದಿನಾಂಕ 23.06.2014

*****

**ಪ್ರಸ್ತಾವನೆ :**

2014-15ನೇ ಸಾಲಿನ ರಾಜ್ಯ ಆಯವ್ಯಯದಡಿ, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಗೆ ₹ 130.00ಲಕ್ಷಗಳ ಅನುದಾನ ನಿಗದಿಪಡಿಸಲಾಗಿದೆ. 2014-15ನೇ ಸಾಲಿನಲ್ಲಿ ಉಲ್ಲೇಖ (2)ರ ಸರ್ಕಾರಿ ಪತ್ರದ ಪ್ರಕಾರ ರೂ.200.00ಲಕ್ಷ ಹೆಚ್ಚುವರಿ ಅನುದಾನವನ್ನಾಗಿ ಆರ್ಥಿಕ ಇಲಾಖೆಯು ಒದಗಿಸಿದ್ದು, ಈ ಪೈಕಿ ಮೊದಲನೇ ಪೂರಕ ಅಂದಾಜಿನಲ್ಲಿ ರೂ.100.00ಲಕ್ಷಗಳನ್ನು ಬಿಡುಗಡೆ ಮಾಡಿರುತ್ತದೆ. ಆದುದರಿಂದ ಹಾಲಿ ಕರ್ನಾಟಕ ಜೈವಿಕ ಇಂಧನ ನೀತಿ ಅನುಷ್ಠಾನಕ್ಕಾಗಿ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಗೆ ಈ ಸಾಲಿನಲ್ಲಿ ರೂ.230.00ಲಕ್ಷ ಒಟ್ಟು ಅನುದಾನ ಲಭ್ಯವಿದ್ದು, ಅದರಲ್ಲಿ ಮೊದಲನೇ ಕಂತು ರೂ.32.50ಲಕ್ಷಗಳನ್ನು ಉಲ್ಲೇಖ (3)ರ ಸರ್ಕಾರಿ ಆದೇಶದಲ್ಲಿ ಬಿಡುಗಡೆ ಮಾಡಲಾಗಿದೆ. ಬಾಕಿ ಉಳಿದ ₹ 82.50ಲಕ್ಷಗಳನ್ನು ಎರಡನೇ ಕಂತಾಗಿ ಲೆಕ್ಕ ಶೀರ್ಷಿಕೆ 2501-04-105-0-03-059 (ಯೋಜನೆ)ರಡಿ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

### ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/43/ಜೈಅಯೋ/2014, ಬೆಂಗಳೂರು, ದಿನಾಂಕ 02.09.2014

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ, ಬೆಂಗಳೂರು ರವರಿಗೆ ಲೆಕ್ಕ ಶೀರ್ಷಿಕೆ 2501-04-105-0-03-059 (ಯೋಜನೆ)ರಡಿ ₹ **82.50ಲಕ್ಷಗಳನ್ನು** (ರೂ. ಎಂಬತ್ತೆರಡು ಲಕ್ಷದ ಐವತ್ತು ಸಾವಿರಗಳು ಮಾತ್ರ) ಎರಡನೇ ಕಂತಿನ ಅನುದಾನವನ್ನಾಗಿ ಜೈವಿಕ ಇಂಧನ ಅಭಿವೃದ್ಧಿಗಾಗಿ ಮಾತ್ರ ವಿನಿಯೋಗಿಸಲು ಈ ಕೆಳಕಂಡ ನಿಬಂಧನೆಗೊಳಪಟ್ಟು ಬಿಡುಗಡೆ ಮಾಡಿದೆ.

ಸದರಿ ಅನುದಾನವು ಹಂಗಾಮಿಯಾಗಿದ್ದು, ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟಿದ್ದು, ಉದ್ದೇಶಿತ ಕಾರ್ಯಕ್ರಮಕ್ಕಾಗಿ ವಿನಿಯೋಗಿಸತಕ್ಕದ್ದು.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ, ಬೆಂಗಳೂರು ರವರು ಗ್ರಾಂಟ್-ಇನ್-ಏಡ್ ಬಿಲ್ಲನ್ನು ಸಲ್ಲಿಸಿ, ನಿರ್ದೇಶಕರು (ಗ್ರಾಮೂಸೌ-2) ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿರವರ ಮೇಲು ರುಜು ಪಡೆದು ಖಜಾನೆಯಿಂದ ಅನುದಾನವನ್ನು ಪಡೆಯತಕ್ಕದ್ದು. ಬಿಡುಗಡೆ ಮಾಡಲಾಗಿರುವ ಅನುದಾನಕ್ಕೆ ವೆಚ್ಚದ ವಿವರಗಳನ್ನು ಸರ್ಕಾರಕ್ಕೆ ನಿಗದಿತವಾಗಿ ಸಲ್ಲಿಸುವುದು.

ಹಾಲಿ ಬಿಡುಗಡೆ ಮಾಡಲಾಗುತ್ತಿರುವ ಅನುದಾನವನ್ನು ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿ ಸಂಖ್ಯೆ: ಗ್ರಾಅಪ/511/ಪಿಬಿಎಸ್/2014 ದಿನಾಂಕ 30.08.2014ರಲ್ಲಿ ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರುಗಳಿಗೆ :

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು
2. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು

3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ, ಬೆಂಗಳೂರು.
4. ಉಪ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
7. ಉಪ ನಿರ್ದೇಶಕರು (ತಾಂತ್ರಿಕ), ರಸ್ತೆ ಮತ್ತು ಸೇತುವೆ ವಿಭಾಗ, ಗ್ರಾ. ಮತ್ತು ಪಂ. ರಾಜ್ ಇಲಾಖೆ.
8. ಉಪ ನಿರ್ದೇಶಕರು, ಟ್ರೆಜರಿ ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖನಿಜ ಭವನ, ಬೆಂಗಳೂರು.
9. ಕಛೇರಿ ಕಡತಕ್ಕೆ / ಹೆಚ್ಚುವರಿ ಪ್ರತಿ.